ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫಸಿ, ನ್ಯಾಯಾಲಯ ಅಂಕೋಲಾ

ಸಿಸಿ ನಂಬರ **292**/2020

ಸಿ ಡಬ್ಲ್ಯೂ- **2**

ಪಿ ಡಬ್ಲ್ಯೂ- **4**

ದಿಃ 21-11-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಸಾಕ್ಷಿಯ ಹೆಸರುಃ ಶ್ರೀಧರ ನಾಯ್ಕ

ತಂದೆಯ ಹೆಸರುಃ ನಾರಾಯಣ

ವಯಸ್ಸುಃ **63** ವರ್ಷ

ಉದ್ಯೋಗಃ ನಿವೃತ್ತ ಕೆ.ಎಸ್.ಆರ್.ಟಿ.ಸಿ. ನೌಕರ

ವಿಳಾಸಃ ಅಂಕೋಲಾ

ಮುಖ್ಯ ವಿಚಾರಣೆ ಮಾನ್ಯ ಎ ಪಿ ಪಿ ಯವರಿಂದಃ

2014 ರಿಂದ 2021 ರವರೆಗೆ ಅಂಕೋಲಾ ಕೆ.ಎಸ್.ಆರ್.ಟಿ.ಸಿ. ಘಟಕದಲ್ಲಿ ಸಂಚಾರಿ ನಿರೀಕ್ಷಕನೆಂದು ಸೇವೆ ಸಲ್ಲಿಸಿದ್ದೇನೆ. ಅಂಕೋಲಾ ಕೆ.ಎಸ್.ಆರ್.ಟಿ.ಸಿ. ಘಟಕದಲ್ಲಿ ಚಾಲಕರು ಮತ್ತು ನಿರ್ವಾಹಕರಿಗೆ ಡ್ಯೂಟಿ ನೇಮಿಸುವ ಕೆಲಸ ನನ್ನ ಕಾರ್ಯವ್ಯಾಪ್ತಿ ಸ್ಥಳವಾಗಿತ್ತು. ಚಾಸಾ-**1** ರವರು ನಮ್ಮ ಡಿಪೋ ಮ್ಯಾನೇಜರ ಎಂದು ಸೇವೆ ಸಲ್ಲಿಸುತ್ತಿದ್ದರು. ಚಾಸಾ-**3** ರಿಂದ **9** ಕೆ.ಎಸ್.ಆರ್.ಟಿ.ಸಿ. ಘಟಕದ ಸಿಬ್ಬಂದಿಗಳಿರುತ್ತಾರೆ. ಆರೋಪಿ ಸಹ ಇಲಾಖೆಯಲ್ಲಿ ಚಾಲಕ ಎಂದು ಸೇವೆ ಸಲ್ಲಿಸುತ್ತಿದ್ದ. ಅಂದಾಜು **4-5** ವರ್ಷಗಳ ಹಿಂದೆ ಪೊಲೀಸರು ಅಂಕೋಲಾ ಬಸ್ ನಿಲ್ದಾಣದಲ್ಲಿ ಸಹಿ ಪಡೆದಿರುತ್ತಾರೆ. ಘಟನಾಸ್ಥಳದ ಪಂಚನಾಮೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು

ಈಗಾಗಲೇ ನಿಪಿ–9 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ–9 ಬಿ ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನೋಡಿಲ್ಲ. ನನ್ನ ಜೊತೆಗೆ ಯಾರು ಸಹಿ ಮಾಡಿರುತ್ತಾರೆಂದು ಮಾಹಿತಿ ಇಲ್ಲ. ಘಟನೆ ಕುರಿತು ಮಾಹಿತಿ ಇಲ್ಲ.

ಈ ಹಂತದಲ್ಲಿ ಎ.ಪಿ.ಪಿ. ಯವರು ಸದ್ರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕಾಗಿ ಕೋರಿಕೊಂಡಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲಾಗಿರುತ್ತದೆ. ಎ.ಪಿ.ಪಿ.ಯವರಿಗೆ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು.

ಪಾಟಿ ಸವಾಲುಃ ಎ.ಪಿ.ಪಿ. ಯವರಿಂದಃ

ದಿಃ 12–08–2018 ರಂದು ಚಾಸಾ–7 ರವರು ತೋರಿಸಿದ ಸ್ಥಳವನ್ನು ಪೊಲೀಸರು ಸಾಯಂಕಾಲ 5.00 ರಿಂದ 5.45 ಗಂಟೆಯವರೆಗೆ ಕೆ.ಎಸ್.ಆರ್.ಟಿ.ಸಿ. ಮುಖ್ಯದ್ವಾರದ ಬಳಿ ಪಂಚನಾಮೆ ಮಾಡಿ, ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ಶ್ರೀ ಎನ್.ಆರ್.ಎನ್. ವಕೀಲರಿಂದಃ

ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿದ್ದೇನೆ, ದಾಖಲೆ ಏನು ಮತ್ತು ಯಾವ ಕಾರಣಕ್ಕಾಗಿ ಬರೆದಿದ್ದಾರೆಂದು ಮಾಹಿತಿ ಇಲ್ಲ ಎಂದರೆ ಸರಿ. ಮೇಲಾಧಿಕಾರಿಗಳು ದಾಖಲೆಗೆ ಸಹಿ ಮಾಡಬೇಕೆಂದು ಹೇಳಿದರೆ ಮಾಡುತ್ತೇವೆ ಎಂದರೆ ಸರಿ.

ಮರು ವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿ ಇದೆ

ಜೆ.ಎಂ.ಎಫ್.ಸಿ.,ಅಂಕೋಲಾ.